

ಅರುಣ ಪಿ. ಭಟ್ಟ


## ವಾರಭವಿಷ್ಯ: 30.10.2025ರಿಂದ 05.11.2025ರವರೆಗೆ




ಉದ್ಯೋಗ ಸ್ಥಳದಲ್ಲಿ ಜವಾಬ್ದಾರಿ ಜಾಸ್ತಿ ಆಗಲಿದೆ. ಆದಾಯದಲ್ಲಿ ಹೆಚ್ಚಳ ಆಗುವ ಸಾಧ್ಯತೆಗಳಿವೆ. ಕೈಗಾರಿಕಾ ಉದ್ಯಮ, ವ್ಯಾಪಾರಸ್ಥರಿಗೆ ಲಾಭದ ಪ್ರಮಾಣ ಹೆಚ್ಚಾಗಲಿದೆ. ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ತೆಗೆದುಕೊಳ್ಳಿ. ವಿರೋಧಿಗಳು ನಿಮಗೆ ಸಮಸ್ಯೆ ಮಾಡಲು ಪ್ರಯತ್ನಿಸಬಹುದು. ವಿದ್ಯಾರ್ಥಿಗಳಿಗೆ ಶುಭ. ಶುಭದಿನ: 02. ಕನಕಧಾರಾ ಸ್ತೋತ್ರ ಪಠಿಸಿರಿ.




ಮನೆಯವರೊಂದಿಗೆ ಉತ್ತಮ ಸಮಯ. ಸಾಮಾಜಿಕ ಕಾರ್ಯಗಳಲ್ಲಿ ಹೆಚ್ಚು ಸಕ್ರಿಯವಾಗಿ ಪಾಲ್ಗೊಳ್ಳಲಿದ್ದೀರಿ. ಹೆಸರಾಂತ ಸಂಸ್ಥೆಯೊಂದರಲ್ಲಿ ಉದ್ಯೋಗ ದೊರೆಯುವ ಅವಕಾಶ ಇದೆ. ಉದ್ಯೋಗಿಗಳಿಗೆ ಪದೋನ್ನತಿ ಸಿಗುವ ಯೋಗ ಇದೆ. ಮನೆಗೆ ಅಗತ್ಯ ಇರುವ ವಸ್ತುಗಳನ್ನು ಖರೀದಿ ಮಾಡಲಿದ್ದೀರಿ. ಆರೋಗ್ಯದ ಬಗ್ಗೆ ಕಾಳಜಿ ವಹಿಸಿ. ಶುಭದಿನ: 03. ಹನುಮಾನ್ ಚಾಲೀಸ್ ಪಠಿಸಿರಿ.





ವಿರೋಧಿಗಳಿಗೆ ತಕ್ಕ ಪ್ರತ್ಯುತ್ತರ ನೀಡಲಿದ್ದಿರಿ. ಆರೋಗ್ಯ ಸಮಸ್ಯೆಗಳು ಎದುರಾಗಬಹುದು. ಕುಟುಂಬದಲ್ಲಿ ಭಿನ್ನಾಭಿಪ್ರಾಯ ತಲೆದೋರುವ ಸಾಧ್ಯತೆ ಇದೆ. ಮನೆಯಲ್ಲಿ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸುವ ಸಾಧ್ಯತೆ ಇದೆ. ಉದ್ಯೋಗ ಸ್ಥಳದಲ್ಲಿ ಅನುಕೂಲಕರವಾದ ವಾತಾವರಣ ಇರಲಿದೆ. ಹಣಕಾಸು ಸ್ಥಿತಿ ಸುಧಾರಿಸಲಿದೆ. ಶುಭದಿನ: 02. ವಿಷ್ಣು ಸಹಸ್ರನಾಮ ಪಠಿಸಿರಿ.





ಸಂಗಾತಿ ಜತೆಗೆ ಬಾಂಧವ್ಯ ಇನ್ನಷ್ಟು ಗಟ್ಟಿ ಆಗಲಿದೆ. ವಿರೋಧಿಗಳು ಸಮಸ್ಯೆ ಮಾಡುವ ಸಾಧ್ಯತೆ ಇದೆ. ದೂರ ಪ್ರಯಾಣವನ್ನು ಮುಂದಕ್ಕೆ ಹಾಕುವುದು ಒಳಿತು. ವೃತ್ತಿಪರ ಜೀವನದಲ್ಲೂ ಕೆಲವು ಸವಾಲುಗಳನ್ನು ಎದುರಿಸಬೇಕಾಗುತ್ತದೆ. ಪ್ರೀತಿ ಅದೃಷ್ಟ ನಿಮ್ಮ ಕೈ ಹಿಡಿಯಲಿದೆ. ಈ ಹಿಂದೆ ಸೋದರ ಸಂಬಂಧಿಗಳ ಜತೆಗೆ ಭಿನ್ನಾಭಿಪ್ರಾಯಗಳು ಇದ್ದಲ್ಲಿ ನಿವಾರಿಸಿಕೊಳ್ಳಲಿದ್ದೀರಿ. ಶುಭದಿನ: 01. ಚಂಡಿ ಪಾರಾಯಣ ಮಾಡಿರಿ.




ಸಂಬಂಧಿಕರಿಂದ ಪ್ರೀತಿ ವಾತ್ಸಲ್ಯ ದೊರೆಯುತ್ತದೆ. ವಿದೇಶ ವ್ಯವಹಾರದಲ್ಲಿ ಏಳ್ಗೆ ಇದೆ. ಕಾನೂನು ವ್ಯಾಜ್ಯಗಳು ಎದುರಾಗಬಹುದು. ಈ ವಾರದಲ್ಲಿ ನಿಮ್ಮ ವರ್ಚಸ್ಸು ಬದಲಾಗಲಿದೆ. ಪ್ರಭಾವಿಗಳಾಗಿ ಹೊರಹೊಮ್ಮಲಿದ್ದೀರಿ. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಸಕ್ರಿಯರಾಗಿ ಪಾಲ್ಗೊಳ್ಳಲಿದ್ದೀರಿ. ಆಪ್ತರ ಜತೆಗೆ ಸುಮಧುರವಾದ ಕ್ಷಣಗಳನ್ನು ಕಳೆಯಲಿದ್ದೀರಿ. ಶುಭದಿನ: 31. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.





ಮಕ್ಕಳಿಗೆ ಸಂಬಂಧಿಸಿದಂತೆ ಶುಭ ಸುದ್ದಿ ಕೇಳಲಿದ್ದೀರಿ. ಆರ್ಥಿಕವಾಗಿ ನಿಮ್ಮ ಸ್ಥಿತಿ ಉತ್ತಮವಾಗಿರುತ್ತದೆ. ಹಲವು ಕ್ಷೇತ್ರದಲ್ಲಿ ಅನುಕೂಲಕರವಾದ ವಾತಾವರಣ ಇರಲಿದೆ. ಕಾನೂನು ವ್ಯಾಜ್ಯಗಳಲ್ಲಿ ಬಹಳ ಎಚ್ಚರಿಕೆಯಿಂದ ಹೆಜ್ಜೆಗಳನ್ನು ಇಡಬೇಕು. ವಿರೋಧಿಗಳಿಂದ ಹಲವು ಬಗೆಯ ಸಮಸ್ಯೆಗಳು ಎದುರಾಗುವ ಸಾಧ್ಯತೆ ಇದೆ. ವಾರಾಂತ್ಯದ ಹೊತ್ತಿಗೆ ಏರಿಳಿತಗಳನ್ನು ಕಾಣುತ್ತೀರಿ. ಶುಭದಿನ: 04. ಕಾಲಭೈರವನ ಸೇವೆ ಮಾಡಿರಿ.





ಕುಟುಂಬ ಸಂತಸದ ವಾತಾವರಣ ಇರಲಿದೆ. ಆರೋಗ್ಯ ಸಮಸ್ಯೆಗಳು ಇದ್ದಲ್ಲಿ ನಿವಾರಣೆ ಆಗುತ್ತವೆ. ಆಸ್ತಿ ವ್ಯವಹಾರಗಳಲ್ಲಿ ಪ್ರಗತಿ ಇದೆ. ಈ ಹಿಂದಿಗಿಂತ ಆರ್ಥಿಕ ಪರಿಸ್ಥಿತಿ ಉತ್ತಮವಾಗಿರುತ್ತದೆ. ವಿವಿಧ ಕ್ಷೇತ್ರಗಳಲ್ಲಿ ನಿರೀಕ್ಷಿತ ಫಲಿತಾಂಶ ಸಿಗಲಿದೆ. ಈ ಹಿಂದಿನ ವಾರಗಳಿಗೆ ಹೋಲಿಸಿದರೆ ಈ ವಾರ ಉತ್ತಮ ಫಲಿತಾಂಶವನ್ನು ಪಡೆಯಲಿದ್ದೀರಿ. ಇದರಿಂದ ಆತ್ಮವಿಶ್ವಾಸ ಹೆಚ್ಚಾಗಲಿದೆ. ಶುಭದಿನ: 03. ಲಿಂಗಾಷ್ಟಕ ಪಠಿಸಿರಿ.





ಆತ್ಮವಿಶ್ವಾಸ ಹೆಚ್ಚಾಗಲಿದೆ. ಸೋದರ ಸೋದರಿಯರ ಜತೆಗೆ ಬಾಂಧವ್ಯ ಇನ್ನಷ್ಟು ಗಟ್ಟಿಯಾಗಲಿದೆ. ಅದೃಷ್ಟ ನಿಮ್ಮ ಕೈ ಹಿಡಿಯಲಿದೆ. ಕೌಟುಂಬಿಕ ಜೀವನದಲ್ಲಿ ಸಂತೋಷ ಇರಲಿದೆ. ಮನೆ ಖರೀದಿಗೆ ಪ್ರಶಸ್ತವಾದ ಸಮಯ ಇದು. ಬೌದ್ಧಿಕ ಸಾಮರ್ಥ್ಯ ವೃದ್ಧಿ ಆಗಲಿದೆ. ವಿರೋಧಿಗಳು ಕಿರಿಕಿರಿ ಉಂಟು ಮಾಡಲಿದ್ದಾರೆ. ಶುಭದಿನ: 02. ಶ್ರೀರಾಮರಕ್ಷಾ ಸ್ತೋತ್ರ ಓದಿರಿ.





ವೈಯಕ್ತಿಕ ಜೀವನದಲ್ಲಿ ಸಂಭ್ರಮದ ವಾತಾವರಣ ಇರಲಿದೆ. ಕುಟುಂಬದಲ್ಲಿ ಒಗ್ಗಟ್ಟು ಹೆಚ್ಚಾಗಲಿದೆ. ಆಸ್ತಿ ವಿಚಾರದಲ್ಲಿ ಶುಭ ಸುದ್ದಿ ಕೇಳುವ ಯೋಗ ಇದೆ. ವಿರೋಧಿಗಳು ನಾನಾ ಬಗೆಯಲ್ಲಿ ಹಿಂಸೆ ನೀಡುವ ಸಾಧ್ಯತೆ ಇದೆ. ಆರೋಗ್ಯ ವಿಚಾರದಲ್ಲಿ ಎಚ್ಚರಿಕೆಯಿಂದ ಇರಬೇಕು. ಮನೆ ವಿಚಾರದಲ್ಲಿ ಪ್ರಗತಿ ಇದೆ. ಶುಭದಿನ: 04. ನವದುರ್ಗಾ ಆರಾಧನೆ ಮಾಡಿರಿ.




ಆರೋಗ್ಯದಲ್ಲಿ ಸಮಸ್ಯೆಗಳಿದ್ದಲ್ಲಿ ಚೇತರಿಕೆ ಕಾಣಿಸಿಕೊಳ್ಳುತ್ತದೆ. ಸ್ಥಿರಾಸ್ತಿಯಲ್ಲಿ ಲಾಭ ಗಳಿಸುವ ಯೋಗ ಇದೆ. ವಿದೇಶಿ ವ್ಯವಹಾರ ಹಾಗೂ ಹೂಡಿಕೆಯಲ್ಲಿ ಸ್ಥಿರವಾದ ಪ್ರಗತಿ ಇದೆ. ವಿರೋಧಿಗಳು ನಿಮ್ಮನ್ನು ಕಾನೂನು ಸಮಸ್ಯೆಗಳಲ್ಲಿ ಸಿಲುಕಿಸಬಹುದು. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಹೆಚ್ಚು ಪಾಲ್ಗೊಳ್ಳಲಿದ್ದೀರಿ. ಹಲವು ವಿಧದಲ್ಲಿ ನಿರೀಕ್ಷೆಗಿಂತ ಉತ್ತಮ ಫಲಿತಾಂಶ ದೊರೆಯಲಿದೆ. ಶುಭದಿನ: 01. ಶಿವಕವಚ ಪಠಣ ಮಾಡಿರಿ.




ಹಣಕಾಸು ಹೂಡಿಕೆಗೆ ಹಲವು ಅವಕಾಶ. ಸಾಲ ಮರುಪಾವತಿಗೆ ಪ್ರಾಮಾಣಿಕ ಪ್ರಯತ್ನ ಪಡುತ್ತೀರಿ. ಸಂಗಾತಿ ನಿರ್ಲಕ್ಷ್ಯ ಮಾಡುತ್ತಿದ್ದಾರೆ ಎಂಬ ಭಾವನೆ ಮೂಡಲಿದೆ. ವಾರದ ಮಧ್ಯಭಾಗದಲ್ಲಿ ಸಂಗಾತಿ ಮಕ್ಕಳ ಜತೆಗೆ ಉತ್ತಮವಾದ ಸಮಯ ಕಳೆಯುವಂಥ ಅವಕಾಶ ದೊರೆಯಲಿದೆ. ಧಾರ್ಮಿಕ ಆಚರಣೆಗಳ ಅನುಷ್ಠಾನ ಮಾಡಲಿದ್ದೀರಿ. ಶುಭದಿನ: 02. ಲಲಿತಾ ಸಹಸ್ರನಾಮ ಪಠಿಸಿರಿ.




ಶೈಕ್ಷಣಿಕ, ಬೌದ್ಧಿಕ ವಿಷಯಗಳಲ್ಲಿ ಪ್ರಗತಿ ಕಾಣಲಿದ್ದೀರಿ. ಸಂಬಂಧಿಕರಿಂದ ಮಹತ್ವದ ಸಹಕಾರ ದೊರೆಯಲಿದೆ. ಮಕ್ಕಳ ವಿಚಾರದಲ್ಲಿ ಶುಭ ಸುದ್ದಿ ಕೇಳುವ ಯೋಗ ಇದೆ. ಪ್ರೀತಿಪಾತ್ರರಿಂದ ಕೆಲವು ಕಾಲ ದೂರ ಇರಬೇಕಾಗಬಹುದು. ಆರೋಗ್ಯ ಸಮಸ್ಯೆಗಳು ಇದ್ದಲ್ಲಿ ಚೇತರಿಕೆ ಕಾಣಿಸಿಕೊಳ್ಳಲಿದೆ. ವಾರಾಂತ್ಯದಲ್ಲಿ ಶುಭ ಸುದ್ದಿ ಕೇಳಲಿದ್ದೀರಿ. ಶುಭದಿನ: 04 ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.